## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1344(1461)
ಸದಸ್ಯರ ಹೆಸರು : ಶ್ರೀ ಸುನೀಲ್ ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 18.12.2025
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸಿವಿಲ್ ಸೇವೆಗೆ ಸೇರುವ ಮುನ್ನವೆ, ನೌಕರರು ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿದ್ದಲ್ಲಿ ಸದರಿ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಅವಕಾಶವಿಲ್ಲವೆಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ದಿನಾಂಕ:18.01.2020, 12.01.2021 ಮತ್ತು 08.06.2023 ರಂದು ಉತ್ತರಿಸಿರುವುದು ನಿಜವೇ. | ಹೌದು |
| ಆ) | ಕರ್ನಾಟಕ ಲೋಕ ಸೇವಾ ಆಯೋಗವು ಪತ್ರ ಸಂಖ್ಯೆ: ಪಿಎಸ್ ಸಿ 119 ಇಪ/2024-25 ದಿನಾಂಕ:30.07.2024ರಡಿ ಆದೇಶದಲ್ಲಿ ಸರ್ಕಾರಿ ನೌಕರಲ್ಲದ ಹಾಗೂ ಕರ್ನಾಟಕ ನಾಗರೀಕ ಸೇವೆಗಳು (ಸೇವೆಗಳು ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಾವಳಿಗಳು 1974ರ ರೀತ್ಯ ಷೆಡ್ಯೂಲ್-II ರಲ್ಲಿ ಯಾವುದೇ ಇಲಾಖಾ ಪರೀಕ್ಷೆಗಳು ನಿಗದಿಯಾಗದ । ನೌಕರರು, ರಾಜ್ಯ ಸಿವಿಲ್ ಸೇವೆಗೆ ಸೇರುವ ಮುನ್ನವೇ ಇಲಾಖಾ ಪರೀಕ್ಷೆ ಪ್ರಮಾಣ ಪತ್ರಗಳನ್ನು ಪಡೆದಿರುವುದನ್ನು ಮಾನ್ಯತೆ ಮಾಡಿ ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಈ ಬಗ್ಗೆ ಕರ್ನಾಟಕ ಲೋಕಸೇವಾ ಆಯೋಗವು ಯಾವುದೇ ಆದೇಶ ಹೊರಡಿಸಿರುವುದಿಲ್ಲ. ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 30-07-2024ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ವಿಜಯಪುರ ಜಿಲ್ಲೆ ಇವರಿಗೆ ಬರೆದ ಪತ್ರವು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಇ) | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ನಿಲುವು ಕಾನೂನು ಬದ್ಧವಾಗಿದೆಯೇ ಅಥವಾ ಕೆ.ಪಿ.ಎಸ್.ಸಿಯ ನಿಲುವು ಕಾನೂನು ಬದ್ಧವಾಗಿದೆ: ಇದರ ವಿವರ ನೀಡುವುದು: | ಕರ್ನಾಟಕ ನಾಗರಿಕ ಸೇವಾ (ಸೇವಾ ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಗಳು, 1974ರ ನಿಯಮ 3ರಲ್ಲಿ ರಾಜ್ಯ ನಾಗರಿಕ ಸೇವಾ ಹುದ್ದೆಗೆ ನೇಮಕಗೊಂಡ ಪ್ರತಿಯೊಬ್ಬರು (ಗ್ರೂಪ್-ಡಿ ನೌಕರರನ್ನು ಹೊರತುಪಡಿಸಿ) ಕನ್ನಡ ಭಾಷಾ ಪರೀಕ್ಷೆ ಸೇರಿದಂತೆ ಹುದ್ದೆಗೆ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳನ್ನು ಕಡ್ಡಾಯವಾಗಿ ತೇರ್ಗಡೆ ಹೊಂದತಕ್ಕದಾಗಿರುತ್ತದೆ.<br>ಕರ್ನಾಟಕ ನಾಗರಿಕ ಸೇವಾ (ಪರಿವೀಕ್ಷಣೆ) ನಿಯಮಗಳು, 1977ರ ನಿಯಮ 3ರನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮುಖಾಂತರ ನೇಮಕಾತಿ ಹೊಂದುವ ಎಲ್ಲಾ ನೌಕರರುಗಳು ಎರಡು ವರ್ಷಗಳಿಗೆ ಕಡಿಮೆ ಇಲ್ಲದ ಅವಧಿಯ ಪರಿವೀಕ್ಷಣೆಯಲ್ಲಿರಬೇಕು ಹಾಗೂ ಹುದ್ದೆಗೆ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳನ್ನು ಕಡ್ಡಾಯವಾಗಿ ತೇರ್ಗಡೆ ಹೊಂದತಕ್ಕದಾಗಿರುತ್ತದೆ.<br><br>ಕರ್ನಾಟಕ ಲೋಕ ಸೇವಾ ಆಯೋಗವು ಸರ್ಕಾರವು ನಿಗದಿಪಡಿಸುವ ಇಲಾಖಾ ಪರೀಕ್ಷೆಗಳನ್ನು ನಡೆಸಿ ಪ್ರಮಾಣ ಪತ್ರಗಳನ್ನು ನೀಡುವ ಪ್ರಾಧಿಕಾರವಾಗಿರುತ್ತದೆ. |

**ಸಿಆಸುಇ 400 ಸೇನೆನಿ 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ